**All India Radio: Bangalore**
**Regional Bulletin In Kannada**
**27.03.2025 / 6.40 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**27.03.2025 / 6.40 p.m.**
*****************

ಮುಖ್ಯಾಂಶಗಳು

೧. ನಂದಿನಿ ಹಾಲು, ಮೊಸರು ದರ ಪ್ರತಿ ಲೀಟರ್‌ಗೆ ೪ ರೂಪಾಯಿ ಏರಿಕೆ - ಏಪ್ರಿಲ್ ೧ ರಿಂದ ದರ ಅನ್ವಯ

೨. ಒಳ ಮೀಸಲಾತಿ ವಿಚಾರ; ಸರ್ಕಾರಕ್ಕೆ ನಾಲ್ಕು ಶಿಫಾರಸ್ಸು ಮಾಡಿದ ನ್ಯಾಯಮೂರ್ತಿ ನಾಗಮೋಹನ್ ದಾಸ್ ವರದಿ

೩. ಸೋಲು ಯಶಸ್ಸಿನ ಮೆಟ್ಟಿಲು; ಕರ್ನಾಟಕ ಮುಕ್ತ ವಿಶ್ವವಿದ್ಯಾಲಯದ ಘಟಿಕೋತ್ಸವದಲ್ಲಿ ರಾಜ್ಯಪಾಲರಿಂದ ವಿದ್ಯಾರ್ಥಿಗಳಿಗೆ ಕಿವಿ ಮಾತು

೪. ಒಳ ಜಗಳ, ಹೊಂದಾಣಿಕೆ ರಾಜಕೀಯದಿಂದ ರಾಜ್ಯದಲ್ಲಿ ಬಿಜೆಪಿ ಅಧ;ಪಥನ - ಬಸನಗೌಡ ಪಾಟೀಲ್ ಯತ್ನಾಳ್ ಭವಿಷ್ಯ

೫. ಕರ್ನಾಟಕ-ಆಂಧ್ರಪ್ರದೇಶ ಗಡಿಯಲ್ಲಿ ಅರೆ ಸೇನಾ ಪಡೆ ಸಮಾರಾಭ್ಯಾಸ

*****************

ಗ್ರಾಹಕರಿಗೆ ಮತ್ತೆ ನಂದಿನಿ ಹಾಲಿನ ಬೆಲೆ ಏರಿಕೆ ಬಿಸಿ ತಟ್ಟಿದೆ. ನಂದಿನಿ ಹಾಲಿನ ದರ ಪ್ರತಿ ಲೀಟರ್‌ಗೆ ೪ ರೂಪಾಯಿ ಏರಿಕೆ ಮಾಡಲು ಸಚಿವ ಸಂಪುಟ ಅನುಮೋದನೆ ನೀಡಿದೆ. ಇಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಕರ್ನಾಟಕ ಹಾಲು ಒಕ್ಕೂಟ ಮತ್ತು ರೈತ ಸಂಘಟನೆಗಳ ಬೇಡಿಕೆಯನ್ನು ಪರಿಗಣಿಸಿ ಬೆಲೆ ಹೆಚ್ಚಳಕ್ಕೆ ಒಪ್ಪಿಗೆ ಸೂಚಿಸಲಾಗಿದೆ.

ನಂದಿನಿಯ ಎಲ್ಲಾ ಬ್ರ್ಯಾಂಡ್ ಹಾಲಿನ ಜೊತೆಗೆ ಮೊಸರಿನ ದರವು ಒಂದು ಲೀಟರ್‌ಗೆ ೪ ರೂಪಾಯಿ ಏರಿಕೆಯಾಗಿದೆ. ಏಪ್ರಿಲ್ ೧ ರಿಂದ ಹೊಸ ದರ ಅನ್ವಯವಾಗಲಿದೆ.

ದರ ಪರಿಷ್ಕರಣೆಯ ಮೊತ್ತವು ರಾಜ್ಯದ ಹಾಲು ಉತ್ಪಾದಕರಿಗೆ ನೇರವಾಗಿ ತಲುಪುವಂತೆ ಕ್ರಮ ಕೈಗೊಳ್ಳಲಾಗುವುದು ಎಂದು ಸರ್ಕಾರ ತಿಳಿಸಿದೆ.

ಇದರಿಂದಾಗಿ ಹೋಟೆಲ್‌ಗಳಲ್ಲಿ ಕಾಫಿ, ಟೀ ಹಾಗೂ ಎಲ್ಲಾ ಹಾಲಿನ ಉತ್ಪನ್ನಗಳ ಬೆಲೆ ಏರಿಕೆಯಾಗಲಿದೆ. ಸರ್ಕಾರ ಒಂದೇ ವರ್ಷದಲ್ಲಿ ಎರಡು ಬಾರಿಗೆ ಹಾಲಿನ ದರ ಏರಿಕೆ ಮಾಡಿದ್ದು, ಫೆಬ್ರವರಿಯಲ್ಲಿ ಪ್ರತಿ ಲೀಟರ್‌ಗೆ ೨ ರೂಪಾಯಿ ಏರಿಕೆ ಮಾಡಲಾಗಿತ್ತು. ಇದೀಗ ಲೀಟರ್‌ಗೆ ನಾಲ್ಕು ರೂಪಾಯಿ ಏರಿಕೆ ಮಾಡಲಾಗಿದೆ.

*****************

ಸರ್ಕಾರಿ ಉದ್ಯೋಗಗಳಲ್ಲಿ ಪರಿಶಿಷ್ಟ ಜಾತಿಗಳಿಗೆ ಒಳ ಮೀಸಲಾತಿ ನೀಡುವ ಕುರಿತಂತೆ ನಿವೃತ್ತ ನ್ಯಾಯಮೂರ್ತಿ ಎಚ್.ಎನ್. ನಾಗಮೋಹನ್ ದಾಸ್ ಸಮಿತಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಇಂದು ೧೦೪ ಪುಟಗಳ ಮಧ್ಯಂತರ ವರದಿ ಸಲ್ಲಿಸಿದೆ.

ವಿಧಾನಸೌಧದಲ್ಲಿಂದು ಸಂಪುಟ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವ ಹೆಚ್ ಕೆ ಪಾಟೀಲ್, ನ್ಯಾಯಮೂರ್ತಿ ನಾಗಮೋಹನ್ ದಾಸ್ ವರದಿಯಲ್ಲಿ ನಾಲ್ಕು ಪ್ರಮುಖ ಶಿಫಾರಸ್ಸುಗಳನ್ನು ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ಹೊಸದಾಗಿ ಸಮೀಕ್ಷೆ ನಡೆಸಿ ದತ್ತಾಂಶ ಸಂಗ್ರಹಿಸಬೇಕು. ಆಧುನಿಕ ತಂತ್ರಜ್ಞಾನ ಬಳಸಿ ೩೦ರಿಂದ ೪೦ ದಿನದೊಳಗೆ ಹೊಸದಾದ ಸಮೀಕ್ಷೆ ನಡೆಸಬೇಕು ಎಂದು ಶಿಫಾರಸ್ಸು ಮಾಡಲಾಗಿದ್ದು, ಇದಕ್ಕೆ ಸಂಪುಟ ಒಪ್ಪಿಗೆ ನೀಡಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಧ್ವನಿ: ಎಚ್.ಕೆ.ಪಾಟೀಲ್

*****************

ಬೇಸಿಗೆಯಲ್ಲಿ ರಾಜ್ಯದಲ್ಲಿ ಕುಡಿಯುವ ನೀರಿನ ಅಭಾವ ನೀಗಿಸಲು ಪ್ರಮುಖ ಜಲಾಶಯಗಳ ನಿರ್ವಹಣೆ ಹಾಗೂ ಕುಡಿಯುವ ನೀರಿಗೆ ವಿಶೇಷ ಒತ್ತು ನೀಡಿ ಸರ್ಕಾರದ ಮುಖ್ಯಕಾರ್ಯದರ್ಶಿಗಳ ನೇತೃತ್ವದಲ್ಲಿ ಸಮಿತಿ ರಚಿಸಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸಂಪುಟ

ಸಭೆಯಲ್ಲಿ ಕುಶಾಲನಗರ, ಮಸಗೋಡು, ಯಲಕನೂರು, ಕಣಿವೆ ರಸ್ತೆ ಅಭಿವೃದ್ಧಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ.

ವಿಜಯಪುರ ಜಿಲ್ಲೆಯ ಸಿಂಧಗಿ, ಮಳವಳ್ಳಿ, ಆನೇಕಲ್ ತಾಲೂಕಿನ ಪ್ರಜಾಸೌಧ ಕಟ್ಟಡಗಳಿಗೆ ಅನುಮೋದನೆ ನೀಡಲಾಗಿದೆ. ಕರ್ನಾಟಕ ರಾಜ್ಯ ಬಾಲ ನ್ಯಾಯ ನಿಯಮ-೨೦೨೫ಕ್ಕೆ ಅಂಕಿತ ಹಾಕಲಾಗಿದೆ. ಮಾರ್ಪಾಡುಗಳೊಂದಿಗೆ ಆರೋಗ್ಯ ಸಂಜೀವಿನಿ ಜಾರಿಗೆ ನಿರ್ಣಯ ಕೈಗೊಳ್ಳಲಾಗಿದೆ. ಗದಗ ಮೆಡಿಕಲ್ ಕಾಲೇಜಿಗೆ ಕೆ.ಎಚ್.ಪಾಟೀಲ್ ಹೆಸರಿಡಲು ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿದೆ.

******************

ಒಳ ಮೀಸಲಾತಿಯಡಿ ಪರಿಶಿಷ್ಟ ಸಮುದಾಯಕ್ಕೆ ನೀಡಿರುವ ಪ್ರಮಾಣಕ್ಕಿಂತ ಕಡಿಮೆ ಪ್ರಮಾಣದ ಮೀಸಲಾತಿ ನಿಗದಿ ಪಡಿಸಿದರೆ ಬಿಜೆಪಿ ರಾಜ್ಯಾದ್ಯಂತ ಹೋರಾಟ ನಡೆಸಲಿದೆ ಎಂದು ವಿಧಾನಪರಿಷತ್ ಮುಖ್ಯ ಸಚೇತಕ ಎನ್.ರವಿಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವರದಿ ಗಮನಿಸಿ ಮುಂದಿನ ನಿರ್ಧಾರ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

******************

ಪ್ರತಿ ದಿನ ಹೊಸ ಸಾಧ್ಯತೆಗಳ ಹುಡುಕಾಟದಲ್ಲಿ ಮುಂದುವರಿಯಿರಿ" ಎಂದು ವಿದ್ಯಾರ್ಥಿಗಳಿಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಕರೆ ನೀಡಿದರು.

ಮೈಸೂರಿನಲ್ಲಿ ಇಂದು ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದ ೨೦ನೇ ಘಟಿಕೋತ್ಸವದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಆಲ್ಬರ್ಟ್ ಐನ್‌ಸ್ಟೈನ್ ಹೇಳಿದಂತೆ "ಸೋಲು ಯಶಸ್ಸಿನ ಮೆಟ್ಟಿಲು' ಎಂದು ಹೇಳಿದ್ದಾರೆ.

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯವು ಲಕ್ಷಾಂತರ ವಿದ್ಯಾರ್ಥಿಗಳಿಗೆ ದೂರ ಶಿಕ್ಷಣ ವ್ಯವಸ್ಥೆಯ ಮೂಲಕ ಕಲಿಕೆಯ ಅವಕಾಶಗಳನ್ನು ಒದಗಿಸಿದೆ. ಇದು ಅವರ ವೈಯಕ್ತಿಕ ಮತ್ತು ವೃತ್ತಿಪರ ಆಕಾಂಕ್ಷೆಗಳನ್ನು ಪೂರೈಸಲು ಅನುವು ಮಾಡಿಕೊಡುತ್ತಿದೆ." ಎಂದು ಶ್ಲಾಘಿಸಿದರು.

*****************

ಒಳ ಜಗಳ ಹಾಗೂ ಹೊಂದಾಣಿಕೆ ರಾಜಕೀಯದಿಂದ ರಾಜ್ಯದಲ್ಲಿ ರಾಜಕೀಯವಾಗಿ ಬಿಜೆಪಿ ಹಿನ್ನಡೆ ಅನುಭವಿಸಲಿದೆ ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ತಿಳಿಸಿದ್ದಾರೆ.

ಐಎಎನ್‌ಎಸ್ ಸುದ್ದಿ ಸಂಸ್ಥೆಯೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಬಿಜೆಪಿಯನ್ನು ದುರ್ಬಲಗೊಳಿಸಿದ ಕೆಲ ನಾಯಕರು ಯಾವುದೇ ಶಿಸ್ತು ಕ್ರಮವಿಲ್ಲದೇ ಮುಕ್ತರಾಗಿದ್ದಾರೆ. ಬಿಜೆಪಿ ಭದ್ರಕೋಟೆ ಕಲಬುರಗಿ, ಕೊಪ್ಪಳ, ರಾಯಚೂರು, ಬಳ್ಳಾರಿ, ಚಿಕ್ಕೋಡಿ ಕ್ಷೇತ್ರಗಳಲ್ಲಿ ಹೊಂದಾಣಿಕೆ ರಾಜಕೀಯದಲ್ಲಿ ತೊಡಗಿಕೊಂಡವರ ವಿರುದ್ಧ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ರಾಜ್ಯದ ಕೆಲ ನಾಯಕರಿಂದಲೇ ಮುಂದಿನ ದಿನಗಳಲ್ಲಿ ಬಿಜೆಪಿ ನಿರ್ನಾಮಗೊಳ್ಳಲಿದೆ ಎಂದು ಭವಿಷ್ಯ ನುಡಿದ್ದಾರೆ.

*****************

ಬಿಜೆಪಿಯಿಂದ ಆರು ವರ್ಷಗಳ ಕಾಲ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರನ್ನು ಉಚ್ಚಾಟನೆ ಮಾಡುವ ನಿರ್ಧಾರದ ಬಗ್ಗೆ  ಹೈ ಕಮಾಂಡ್ ಮರು ಪರಿಶೀಲಿಸಬೇಕು ಎಂದು ಮಾಜಿ ಸಚಿವ ಬಿ. ಶ್ರೀರಾಮುಲು ಮನವಿ ಮಾಡಿದ್ದಾರೆ

ಬಳ್ಳಾರಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಅತಿ ದೊಡ್ಡ ದೊಡ್ಡ ಸಮುದಾಯದ ನಾಯಕನನ್ನು ಕಳೆದುಕೊಳ್ಳುವುದು ಸರಿಯಲ್ಲ. ಪಂಚಮಸಾಲಿ ಹಾಗೂ ಲಿಂಗಾಯತ ಸಮುದಾಯದಿಂದ  ಶೇಕಡ ೨೦ ರಿಂದ ೨೪ ರಷ್ಟು ಮತಗಳಿವೆ ಎಂದು ಅಭಿಪ್ರಾಯಪಟ್ಟಿದ್ದಾರೆ.

*****************

ಗ್ರೇಟರ್ ಬೆಂಗಳೂರು ಯೋಜನೆಯ ಹಿಂದೆ ಕಾಂಗ್ರೆಸ್ ಸರ್ಕಾರದ ಗುಪ್ತ ಕಾರ್ಯಸೂಚಿ ಇದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ ಆರೋಪಿಸಿದ್ದಾರೆ.  ಇದು ಬೆಂಗಳೂರಿನ ಬೆಳವಣಿಗೆ ದೃಷ್ಟಿಯಿಂದ ಒಳ್ಳೆಯದಲ್ಲ ಎಂದು ತಿಳಿಸಿದ್ದಾರೆ.

ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಗ್ರೇಟರ್ ಬೆಂಗಳೂರು ಆಡಳಿತ ಮಸೂದೆ, ೨೦೨೫ ಹಿಂದಿರುಗಿಸಿದ ಕುರಿತಂತೆ ಪ್ರತಿಕ್ರಿಯಿಸಿ "ಗ್ರೇಟರ್ ಬೆಂಗಳೂರು ಯೋಜನೆಯು ಆರ್ಥಿಕ ಮತ್ತು ಅಭಿವೃದ್ಧಿಯಲ್ಲಿ ಅಸಮಾನತೆಗಳಿಗೆ ಕಾರಣವಾಗುವ ಸಾಧ್ಯತೆಯಿದೆ ಎಂದು ಆರೋಪಿಸಿದ್ದಾರೆ.

*****************

ಕರ್ನಾಟಕ ಆಂಧ್ರದ ಗಡಿಯಲ್ಲಿ ಅರೆಸೇನಾಪಡೆ ಇಂದು ಸಮರಾಭ್ಯಾಸ ನಡೆಸಿತು.

ಕಮಾಂಡೆಟ್ ನಿಖಿಲ್ ನೇತೃತ್ವದಲ್ಲಿ ತಾಲೂಕಿನ ಜೋಳದರಾಶಿ, ಕೆ.ವೀರಾಪುರ, ಚೇಳಗುರ್ಕಿ ಮತ್ತು ಆಂಧ್ರದ ಡೊಣೆಕಲ್ ಮಧ್ಯದ ಬಯಲು ಪ್ರದೇಶದಲ್ಲಿ ಸಮರಾಭ್ಯಾಸ ನಡೆಯಿತು.

ಬೆಂಗಳೂರಿನಲ್ಲಿ ಸೈನಿಕ ತರಬೇತಿ ಪಡೆದ ಯೋಧರು ಯುದ್ಧ ವಿಮಾನದಿಂದ ೩೫ ಸಾವಿರ ಅಡಿ ಎತ್ತರದಿಂದ ಪ್ಯಾರಚೂಟ್ ಮೂಲಕ ಜಿಗಿದ ದೃಶ್ಯ ರೋಮಾಂಚನ ಮೂಡಿಸಿತು.

*****************

ಧಾರವಾಡದಲ್ಲಿ ಮಾರ್ಚ್ ೨೧ ರಂದು ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಗೆ ಹಾಜರಾಗುವ ೪ ಗಂಟೆ ಮೊದಲು ತಂದೆ ಸಾವನ್ನಪ್ಪಿದರೂ ಪರೀಕ್ಷೆ ಬರೆದು ತಂದೆಯ ಅಂತಿಮ ಕ್ರಿಯೆಯಲ್ಲಿ ಭಾಗವಹಿಸಿದ್ದ ನವಲಗುಂದ ಪಟ್ಟಣದ ಶಬಾನಾ ಪಠಾಣ ಅವರ ನಿವಾಸಕ್ಕೆ ಜಿಲ್ಲಾಧಿಕಾರಿ ದಿವ್ಯ ಪ್ರಭು ಇಂದು ಭೇಟಿ ನೀಡಿದ್ದಾರೆ.

ಈ ವೇಳೆ ಮಾತನಾಡಿದ ಅವರು, ಈಕೆ ಪ್ರತಿ ಒಬ್ಬರಿಗೂ ಮಾದರಿಯಾಗಿದ್ದಾಳೆ. ಈಕೆಯ ಸಹೋದರಿಯ ಶಿಕ್ಷಣಕ್ಕೆ ಜಿಲ್ಲಾಡಳಿತ ಬೆಂಬಲ ನೀಡಲಿದೆ. ಈಗಾಗಲೇ ಈ ಕುಟುಂಬಕ್ಕೆ ಆಶ್ರಯ ಪ್ಲಾಟ್ ಮಂಜೂರು ಆಗಿದ್ದು, ಮೂರು ತಿಂಗಳಲ್ಲೇ ಮನೆ ಕಟ್ಟಿ ಕೊಡುವುದಾಗಿ ತಿಳಿಸಿದ್ದಾರೆ.

ಧ್ವನಿ: ಜಿಲ್ಲಾಧಿಕಾರಿ ದಿವ್ಯ ಪ್ರಭು

*****************

ಬೇಸಿಗೆ ಅವಧಿಯಲ್ಲಿ ಪ್ರಯಾಣಿಕರ ಹೆಚ್ಚುವರಿ ದಟ್ಟಣೆ ಗಮನದಲ್ಲಿಟ್ಟುಕೊಂಡು ಮಧ್ಯ ರೈಲ್ವೆಯು ಛತ್ರಪತಿ ಶಿವಾಜಿ ಮಹಾರಾಜ್ ಟರ್ಮಿನಲ್ ಮುಂಬೈ ಮತ್ತು ಸರ್. ಎಂ. ವಿಶ್ವೇಶ್ವರಯ್ಯ ಟರ್ಮಿನಲ್ ಬೆಂಗಳೂರು ನಡುವೆ ವಿಶೇಷ ಎಕ್ಸ್‌ಪ್ರೆಸ್ ರೈಲುಗಳನ್ನು ಓಡಿಸಲು ನಿರ್ಧರಿಸಿದೆ.

ಈ ರೈಲುಗಳು, ಎರಡೂ ದಿಕ್ಕುಗಳಲ್ಲಿ ದಾದರ್, ಥಾಣೆ, ಕಲ್ಯಾಣ್, ಲೋನಾವಾಲ, ಪುಣೆ, ಸತಾರಾ, ಕರಾಡ್, ಸಾಂಗ್ಲಿ, ಮಿರಜ್, ಕುಡಚಿ, ರಾಯಬಾಗ್, ಘಟಪ್ರಭಾ, ಬೆಳಗಾವಿ, ಲೋಂಡಾ, ಧಾರವಾಡ, ಎಸ್ಎಸ್ಎಸ್ ಹುಬ್ಬಳ್ಳಿ, ಹಾವೇರಿ, ರಾಣಿಬೆನ್ನೂರು, ಹರಿಹರ, ದಾವಣಗೆರೆ, ಬಿರೂರು, ಅರಸೀಕೆರೆ ಮತ್ತು ತುಮಕೂರು ನಿಲ್ದಾಣಗಳಲ್ಲಿ  ನಿಲುಗಡೆಯಾಗಲಿದೆ.

ಹೆಚ್ಚಿನ ಮಾಹಿತಿಗಾಗಿ ಪ್ರಯಾಣಿಕರು ಅಧಿಕೃತ ರೈಲ್ವೆ ವೆಬ್‌ಸೈಟ್‌ಗೆ ಭೇಟಿ ನೀಡಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

*********ಮುಕ್ತಾಯ*********